ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2019 /2529

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 19/03/2020.

## ಹಿಂಬರಹ

ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 63 ಸೇವನೆ 2019 ದಿನಾಂಕ:28-02-2020ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಇ.ಎಸ್.ಟಿ.(1)ಎ, ಮತ್ತು ಇ.ಎಸ್.ಟಿ.(2)ಎ, ವಿಭಾಗಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

sh E-7AG

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 63 ಸೇವನೆ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 28.02.2020.

## ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) (ತಿದ್ದುಪಡಿ) ನಿಯಮಗಳು, 2020 ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 22.01.2020ರ ಅಧಿಸೂಚನೆ ಸಂಖ್ಯೆ: ಸಿಆಸುಇ 63 ಸೇವನೆ 2019ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 22.01.2020ರ ಕರ್ನಾಟಕ ರಾಜ್ಯಪತ್ರದ ಭಾಗ- IV ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978ರ (1990ರ ಕರ್ನಾಟಕ ಅಧಿನಿಯಮ 14) 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ)ಖಂಡವನ್ನು ಪ್ರಕರಣ 8ರೊಂದಿಗೆ ಓದಿಕೊಂಡು ಅದರಲ್ಲಿ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 22.01.2020 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಸ್ವೀಕೃತವಾಗಿರುವ ಆಕ್ಷೇಪಣೆ/ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸಿರುವುದರಿಂದ ;

ಈಗ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ, 14)ರ 3ನೇ ಪ್ರಕರಣದ (1)ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

126960
3456 GIA (9)

## ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) (ತಿದ್ದುಪಡಿ) ನಿಯಮಗಳು, 2020 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮ ಪ್ರಕಟಣೆಯ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 5ಕ್ಕೆ ತಿದ್ದುಪಡಿ:-** ಕರ್ನಾಟಕ ಸಿವಿಲ್ ಸೇವಾ ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು, 2006ರ ನಿಯಮ 5ರ ಖಂಡ (1)ರ ನಂತರ ಈ ಕೆಳಕಂಡ ಪರಂತುಕವನ್ನು ಸೇರಿಸತಕ್ಕದ್ದು :-

"ಪರಂತು, ಈ ನಿಯಮಗಳಡಿ ಆಯ್ಕೆ ಮಾಡಲಾಗುವ ಯಾವುದೇ ಗ್ರೂಪ್ "ಎ" ಅಥವಾ "ಬಿ" ಹುದ್ದೆಗಳಿಗೆ ಸಂದರ್ಭಾನುಸಾರವಾಗಿ ಸಂದರ್ಶನವನ್ನು ನಡೆಸುವ ಅಗತ್ಯವಿಲ್ಲವೆಂದು

2...

RS/1488
16/3/20

ನಿರ್ಣಯಿಸಿದಲ್ಲಿ, ಸರ್ಕಾರವು ಅಂತಹ ವರ್ಗದ ಹುದ್ದೆಗಳಿಗೆ ಸಂದರ್ಶನದಿಂದ ವಿನಾಯಿತಿ ನೀಡಿ ಅಧಿಸೂಚಿಸಬಹುದು" .

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Gayathri. M.R 28.02.2020

(ಗಾಯತ್ರಿ. ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ - ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 100 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಬಿ)ಗೆ ಕಳುಹಿಸಿಕೊಡಲು ಕೋರಿದೆ.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರು.
9. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
14. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
15. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
16. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ) (ವಿಷಯ ಸಂಖ್ಯೆ: ಸಿ: 744/2019).
17. ಸಚಿವಾಲಯದ ಎಲ್ಲಾ ಶಾಖೆಗಳು
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
19. ಪತ್ರಿಕಾ ಪ್ರಕಟಣೆ
20. ವಾರದ ರಾಜ್ಯಪತ್ರ.
21. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

**(*ಪ್ರತ್ಯೇಕ ಮುಖಪತ್ರದೊಂದಿಗೆ)**